**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560003.**

ಸಂಖ್ಯೆ: ಎ1/ಎಸ್.ಎಸ್.ಎಲ್.ಸಿ/ಪ–2/04/2024–25 ದಿನಾಂಕ:10.05.2024

**ಪರಿಷ್ಕೃತ ಮಾರ್ಗಸೂಚಿ**

ವಿಷಯ:– 2024ರ ಎಸ್ ಎಸ್ ಎಲ್ ಸಿ ಪರೀಕ್ಷೆ–2ಕ್ಕೆ ಪುನರಾವರ್ತಿತ ಮತ್ತು **ಫಲಿತಾಂಶ ಉತ್ತಮಪಡಿಸಿಕೊಳ್ಳುವ** ವಿದ್ಯಾರ್ಥಿಗಳು ನೋಂದಣಿ ಮಾಡಿಕೊಳ್ಳುವ ಕುರಿತು ಮಾರ್ಗಸೂಚಿ.

*******

2024 ರ ಎಸ್ ಎಸ್ ಎಲ್ ಸಿ ಪರೀಕ್ಷೆ–1 ಕ್ಕೆ ನೋಂದಾಯಿಕೊಂಡು ಪರೀಕ್ಷೆಗೆ ಗೈರು ಹಾಜರಾದ / ಪೂರ್ಣಗೊಳಿಸಲಾಗಿಲ್ಲದ [Not Completed] / ಹಿಂದಿನ ಸಾಲಿನಲ್ಲಿ ಅನುತ್ತೀರ್ಣರಾದ ಹಾಗೂ **ಫಲಿತಾಂಶ ಉತ್ತಮಪಡಿಸಿಕೊಳ್ಳುವ** ಅಭ್ಯರ್ಥಿಗಳಿಗೆ 2024ರ ಜೂನ್ ಮಾಹೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆ–2ನ್ನು ನಡೆಸಲಾಗುವುದು. ಈ ಹಿನ್ನೆಲೆಯಲ್ಲಿ ಅರ್ಹ ಪುನರಾವರ್ತಿತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

1. 2002-03 ರಿಂದ 2023-24ರ ಎಸ್.ಎಸ್.ಎಲ್.ಸಿ ಪರೀಕ್ಷೆವರೆಗೆ ಪೂರ್ಣಗೊಳಿಸಲಾಗಿಲ್ಲದ [Not Completed] / 2024ರ ಪರೀಕ್ಷೆ–1ಕ್ಕೆ ನೋಂದಾಯಿಸಿಕೊಂಡು ಗೈರು ಹಾಜರಾಗಿರುವ ಅರ್ಹ ಅಭ್ಯರ್ಥಿಗಳು ಹಾಗೂ **ಫಲಿತಾಂಶ ಉತ್ತಮಪಡಿಸಿಕೊಳ್ಳುವ** ಅಭ್ಯರ್ಥಿಗಳನ್ನು ಶಾಲಾ ಮುಖ್ಯೋಪಾಧ್ಯಾಯರು ಮಂಡಳಿಯ https://kseab.karnataka.gov.in ಜಾಲತಾಣದ ಶಾಲಾ ಲಾಗಿನ್ ಮೂಲಕ ಪರೀಕ್ಷೆ–2ಕ್ಕೆ ನೋಂದಣಿ ಮಾಡುವುದು. ಶಾಲಾ ಲಾಗಿನ್‌ನಲ್ಲಿ Registration for 2024 Exam-2ನ್ನು ಕ್ಲಿಕ್‌ಮಾಡಿದಾಗ ENTER REGISTER NUMBER ಎನ್ನುವ ಆಯ್ಕೆ ದೊರಕುತ್ತದೆ. ಈ ಆಯ್ಕೆಯಲ್ಲಿ ವಿದ್ಯಾರ್ಥಿಗಳ ನೋಂದಣಿ ಸಂಖ್ಯೆಯನ್ನು ನಮೂದು ಮಾಡಲು ಅವಕಾಶ ನೀಡಲಾಗಿದೆ. ಪರೀಕ್ಷೆಗೆ ನೋಂದಾಯಿಸಿಕೊಳ್ಳುವ ವಿದ್ಯಾರ್ಥಿಯ ನೋಂದಣಿ ಸಂಖ್ಯೆಯನ್ನು ನಮೂದು ಮಾಡಿ Submit ಕೊಟ್ಟಾಗ ಆ ವಿದ್ಯಾರ್ಥಿಯ ವಿವರಗಳು, ವಿದ್ಯಾರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಮಾಧ್ಯಮ, ದೈಹಿಕ ಸ್ಥಿತಿ, ಜನ್ಮ ದಿನಾಂಕ, ಪರೀಕ್ಷೆ ತೆಗೆದುಕೊಳ್ಳುತ್ತಿರುವ ವಿಷಯಗಳು ತೆರೆದುಕೊಳ್ಳುತ್ತವೆ. ಇವುಗಳಲ್ಲಿ ಯಾವುದೇ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

   2021–22 ಮತ್ತು 2022–23 ನೇ ಸಾಲಿನಲ್ಲಿ ಪರೀಕ್ಷೆ ಬರೆದು ಅನುತ್ತೀರ್ಣಗೊಂಡ ವಿದ್ಯಾರ್ಥಿಗಳ ಹಾಗೂ ಮಾರ್ಚ್/ಏಪ್ರಿಲ್ 2024ರ ಎಸ್.ಎಸ್.ಎಲ್.ಸಿ ಪರೀಕ್ಷೆ–1 ಕ್ಕೆ ನೋಂದಾಯಿಸಿಕೊಂಡು ಪೂರ್ಣಗೊಳಿಸಲಾಗಿಲ್ಲದ [Not Completed] ಹಾಗೂ **ಫಲಿತಾಂಶ ಉತ್ತಮಪಡಿಸಿಕೊಳ್ಳುವ** ವಿದ್ಯಾರ್ಥಿಗಳ ಭಾವಚಿತ್ರ ಮತ್ತು ಸಹಿಗಳು ಮಂಡಳಿಯಲ್ಲಿ ಲಭ್ಯವಿದ್ದು, ಸದರಿ ಅಭ್ಯರ್ಥಿಗಳು ಈ ಪೂರಕ ಪರೀಕ್ಷೆಗೆ ನೋಂದಾಯಿಸಿಕೊಂಡಲ್ಲಿ ಪುನ: ಇವರುಗಳ ಭಾವಚಿತ್ರ ಮತ್ತು ಸಹಿಗಳನ್ನು ಅಪ್‌ಲೋಡ್ ಮಾಡುವ ಅವಶ್ಯಕತೆ ಇರುವುದಿಲ್ಲ.

2. 2002ರ ಹಿಂದಿನ ವರ್ಷಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ನೋಂದಾಯಿಸಲು ಈ ಹಿಂದೆ ಇದ್ದಂತೆ MSA ಅರ್ಜಿಗಳನ್ನು ಭರ್ತಿ ಮಾಡಿ ಅರ್ಜಿ ಮೂಲಕ ಸಲ್ಲಿಸಬಹುದಾಗಿದೆ. ಈ ವಿದ್ಯಾರ್ಥಿಗಳಿಗೆ ಆನ್‌ಲೈನ್‌ನಲ್ಲಿ ನೋಂದಾಯಿಸಲು ಅವಕಾಶ ಕಲ್ಪಿಸಲಾಗಿರುವುದಿಲ್ಲ. ಇಂತಹ ಅಭ್ಯರ್ಥಿಗಳ ಎಂ.ಎಸ್.ಎ ಫಾರಂನಲ್ಲಿ ವಿದ್ಯಾರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ 2 ಭಾವಚಿತ್ರಗಳನ್ನು ಅಂಟಿಸಿ ಧೃಡೀಕರಿಸಿ ಸಲ್ಲಿಸಬೇಕು. ಎಂ.ಎಸ್.ಎ ಅರ್ಜಿಗಳನ್ನು ಪರಿಶೀಲಿಸುವಾಗ ಎಂ.ಎಸ್.ಎ ನಲ್ಲಿರುವ ಶಾಲಾ ಸಂಕೇತವು ತಮ್ಮ ಶಾಲೆಯದೇ ಎಂಬುದನ್ನು ಖಚಿತಪಡಿಸಿಕೊಳ್ಳುವುದು. ಈ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ನಿಗದಿತ ಬ್ಯಾಂಕ್

NEFT ಚಲನ್ ಮೂಲಕ ಪಾವತಿಸಿ ಎಂ.ಎಸ್.ಎ ಅರ್ಜಿ, ಭಾವಚಿತ್ರ, ಶುಲ್ಕ ಪಾವತಿಯ ಚಲನ್‌ನೊಂದಿಗೆ ಮಂಡಳಿಗೆ ಸಲ್ಲಿಸುವುದು. ಈ ಮೂರು ಮಾಹಿತಿಗಳಿದ್ದಲ್ಲಿ ಮಾತ್ರ ಅರ್ಜಿಗಳನ್ನು ಪರಿಗಣಿಸಲಾಗುವುದು. ಇಲ್ಲವಾದಲ್ಲಿ ವಿದ್ಯಾರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುತ್ತದೆ. ಒಂದು ವೇಳೆ ಈ ವಿದ್ಯಾರ್ಥಿಗಳ ಎಂ.ಎಸ್.ಎ ಗಳು ಶಾಲೆಯಲ್ಲಿ ಲಭ್ಯವಿಲ್ಲದಿದ್ದಲ್ಲಿ ಮಂಡಳಿಯ ವಿಭಾಗೀಯ ಕಛೇರಿಗಳಿಂದ ನಿಗಧಿತ ಶುಲ್ಕ ಪಾವತಿಸಿ ಪಡೆದು ಸಲ್ಲಿಸುವುದು ಕಡ್ಡಾಯ.

3. 2003ಕ್ಕೂ ಹಿಂದಿನ ವರ್ಷಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳ ಎಂ.ಎಸ್.ಎ ಮೂಲಕ ಸಲ್ಲಿಸುವ ಪ್ರಸ್ತಾವನೆಯ ಲಕೋಟೆಯ ಮೇಲೆ **<u>2024ರ ಎಸ್.ಎಸ್.ಎಲ್.ಸಿ ಪರೀಕ್ಷೆ-2 ಕ್ಕೆ ಅರ್ಜಿಗಳು</u>** ಎಂದು ಬರೆಯುವುದು ಹಾಗೂ ನಿಮ್ಮ ಜಿಲ್ಲೆಗೆ ಸಂಬಂಧಿಸಿದ ಮಂಡಳಿಯ ಅಧಿಕಾರಿಗಳ ಹೆಸರು ಮತ್ತು ಶಾಖೆಯನ್ನು ಲಕೋಟೆಯ ಮೇಲೆ ತಪ್ಪದೇ ಬರೆಯುವುದು.
4. ಮಂಡಳಿ ನಿಗದಿಪಡಿಸಿರುವ ಅಂತಿಮ ದಿನಾಂಕ **"ಸಾರ್ವತ್ರಿಕ ರಜಾ ದಿನ"** ಎಂಬುದಾಗಿ ಘೋಷಿಸಿದ್ದಲ್ಲಿ ಮಾರನೇ ಕೆಲಸದ ದಿನವನ್ನು ಕೊನೆಯ ದಿನಾಂಕವೆಂದು ಪರಿಗಣಿಸುವುದು. ಈ ಕೆಳಗೆ ನಮೂದಿಸಿರುವ ಮಂಡಳಿಯ ಅಧಿಕಾರಿಗಳು ಮತ್ತು ಉಸ್ತುವಾರಿ ನಿರ್ವಹಿಸುವ ಜಿಲ್ಲೆಗಳ ವಿವರಗಳನ್ನು ನೀಡಿದೆ. ಸಂಬಂಧಿಸಿದ ಶಾಲಾ ಮುಖ್ಯಸ್ಥರು ನಿಮ್ಮ ಜಿಲ್ಲೆಗೆ ಸಂಬಂಧಿಸಿದ ಅಧಿಕಾರಿಗಳ ಹೆಸರನ್ನು ಲಕೋಟೆಯ ಮೇಲೆ ತಪ್ಪದೇ ಬರೆಯಬೇಕು.
5. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಹಾಗೂ ವಿಭಿನ್ನಸಾಮರ್ಥ್ಯವುಳ್ಳ ವಿದ್ಯಾರ್ಥಿಗಳಿಗೆ ಮಾತ್ರ ಪರೀಕೆ-2ಕ್ಕೆ ಪರೀಕ್ಷಾ ಶುಲ್ಕದಿಂದ ವಿನಾಯಿತಿ ನೀಡಲಾಗಿದೆ

**<u>ಫಲಿತಾಂಶ ಉತ್ತಮಪಡಿಸಿಕೊಳ್ಳುವ ಮತ್ತು ಅನುತ್ತೀರ್ಣ ವಿದ್ಯಾರ್ಥಿಗಳು ಪಾವತಿಸಬೇಕಾಗಿರುವ ಪರೀಕ್ಷಾ ಶುಲ್ಕದ ವಿವರಗಳು:</u>**

| ಕ್ರಮ ಸಂಖ್ಯೆ | ಪರೀಕ್ಷಾ ಶುಲ್ಕದ ವಿವರ |
|---|---|
| 01 | ಒಂದು ವಿಷಯಕ್ಕೆ ರೂ.407/- (ನಾಲ್ಕು ನೂರ ಏಳು ರೂಪಾಯಿಗಳು) |
| 02 | ಎರಡು ವಿಷಯಕ್ಕೆ ರೂ.507/- (ಐದು ನೂರ ಏಳು ರೂಪಾಯಿಗಳು) |
| 03 | ಮೂರು ಅಥವಾ ಮೂರಕ್ಕಿಂತ ಮೇಲ್ಪಟ್ಟು ರೂ.682/- (ಆರು ನೂರ ಎಂಬತ್ತೆರಡು ರೂಪಾಯಿಗಳು) |

**ಆನ್‌ಲೈನ್‌ನಲ್ಲಿ ಪರೀಕ್ಷಾ ಅರ್ಜಿಯನ್ನು ನೋಂದಾಯಿಸಲು ಹಾಗೂ NEFT ಚಲನ್ ಮೂಲಕ ಬ್ಯಾಂಕ್‌ಗೆ ಪರೀಕ್ಷಾ ಶುಲ್ಕ ಪಾವತಿಸಲು ನಿಗಧಿಪಡಿಸಿರುವ ದಿನಾಂಕಗಳು:**

| ಕ್ರ ಸಂ | ವಿವರ | ನಿಗದಿಪಡಿಸಿರುವ ದಿನಾಂಕ |
|---|---|---|
| 1 | ಮಂಡಳಿ ಜಾಲತಾಣದ ಶಾಲಾ ಲಾಗಿನ್ ಮೂಲಕ ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು **<u>ಪ್ರಾರಂಭ</u>** ದಿನಾಂಕ | 09.05.2024 |
| 2 | ಮಂಡಳಿ ಜಾಲತಾಣದ ಶಾಲಾ ಲಾಗಿನ್ ಮೂಲಕ ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು ನಿಗದಿಪಡಿಸಿದ **<u>ಅಂತಿಮ</u>** ದಿನಾಂಕ: | 16.05.2024 |
| 3 | ಮಂಡಳಿ ಜಾಲತಾಣದ ಶಾಲಾ ಲಾಗಿನ್ ಮೂಲಕ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ಚಲನ್ ಮುದ್ರಿಸಿಕೊಳ್ಳಲು ನಿಗದಿಪಡಿಸಿದ ದಿನಾಂಕ: | 18.05.2024 |
| 4 | ಕ್ರಮ ಸಂಖ್ಯೆ-3ರಂತೆ ಚಲನ್ ಮುದ್ರಿಸಿಕೊಂಡು ಬ್ಯಾಂಕ್‌ಗೆ ಜಮೆ ಮಾಡಲು ನಿಗದಿಪಡಿಸಿದ ದಿನಾಂಕ | 20.05.2024 |
| 5 | 2002 ಮತ್ತು ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (NSR & NSPR) ಪರೀಕ್ಷಾ ಶುಲ್ಕವನ್ನು ಹಳೆಯ | 20.05.2024 |

| | | |
|---|---|---|
| | ಪದ್ಧತಿಯಂತೆ ಮಂಡಳಿಯ ನೆಫ್ಟ್ ಚಲನ್ ಮೂಲಕ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಪಾವತಿಸಲು ನಿಗದಿಪಡಿಸಿದ <u>ಅಂತಿಮ</u> ದಿನಾಂಕ | |
| 6 | **ಕೆಳಕಂಡ ದಾಖಲೆಗಳನ್ನು ಮಂಡಳಿಗೆ ಸಲ್ಲಿಸಲು ನಿಗಧಿಪಡಿಸಿದ <u>ಅಂತಿಮ</u> ದಿನಾಂಕ**<br>• ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನೊಳಗೊಂಡಂತೆ ಶಾಲಾ ಲಾಗಿನ್‌ನಲ್ಲಿ ಸೃಜಿಸಲಾಗುವ ಚಲನ್ ಬಳಸಿಕೊಂಡು ಶುಲ್ಕ ಪಾವತಿಸಿದ ಮೂಲ ಚಲನ್<br>• 2002 ಮತ್ತು ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (NSR & NSPR) ಎಂಎಸ್‌ಎ ಮತ್ತು ಹಿಂದಿನ ಪದ್ದತಿಯಂತೆ ಮಂಡಳಿ ನೆಫ್ಟ್ ಚಲನ್ ಮೂಲಕ ಶುಲ್ಕ ಪಾವತಿಸಿದ ಮೂಲ ಚಲನ್<br>• ನಾಮಿನಲ್‌ರೋಲ್ ಮತ್ತು ಸಂಬಂಧಿಸಿದ ಇತರೆ ದಾಖಲೆಗಳು | 24.05.2024 |

6. **ಪರೀಕ್ಷಾರ್ಥಿಗಳ ಪರೀಕ್ಷಾ ಶುಲ್ಕವನ್ನು ಪಾವತಿಸಲು ಮತ್ತು ಆನ್‌ಲೈನ್‌ನಲ್ಲಿ ಅಭ್ಯರ್ಥಿಗಳ ವಿವರಗಳನ್ನು ನೋಂದಾಯಿಸಲು ಮೇಲೆ ನಿಗಧಿಪಡಿಸಿರುವ ದಿನಾಂಕದ ನಂತರ ಜಾಲತಾಣದಲ್ಲಿ ಅಪ್‌ಲೋಡ್ ಮಾಡಲು ಅವಕಾಶವಿರುವುದಿಲ್ಲ.**
7. ಇತರೆ ಶಾಲೆಯ ವಿದ್ಯಾರ್ಥಿಗಳ ಅರ್ಜಿಗಳನ್ನು ಯಾವುದೇ ಕಾರಣಗಳಿಂದ ತಮ್ಮ ಶಾಲೆಯ ಮುಖೇನ ಸಲ್ಲಿಸುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ.
8. 2024ರ ಪರೀಕ್ಷೆ-1ರಲ್ಲಿ ಪೂರ್ಣಗೊಳಿಸಲಾಗಿಲ್ಲದ [Not Completed] ಹಾಗೂ **ಫಲಿತಾಂಶ ಉತ್ತಮಪಡಿಸಿಕೊಳ್ಳುವ** ವಿದ್ಯಾರ್ಥಿಗಳು ಛಾಯಾಪ್ರತಿ, ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ್ದಲ್ಲಿ ಫಲಿತಾಂಶಕ್ಕೆ ಕಾಯದೆ 2024ರ ಎಸ್.ಎಸ್.ಎಲ್.ಸಿ ಪರೀಕ್ಷೆ-2ಕ್ಕೆ **ನಿಗಧಿತ ದಿನಾಂಕದೊಳಗೆ** ಶುಲ್ಕ ಪಾವತಿಸಿ **ನೋಂದಾಯಿಸಿಕೊಳ್ಳುವುದು ಕಡ್ಡಾಯವಾಗಿರುತ್ತದೆ.**
9. ಶಾಲಾ ಮುಖ್ಯಸ್ಥರು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಶುಲ್ಕವನ್ನು ಮಂಡಳಿ **ಜಾಲತಾಣದ ಶಾಲಾ ಲಾಗಿನ್‌ನಲ್ಲಿ ಚಲನ್ ಜನರೇಟ್ ಮಾಡಿಕೊಂಡು ರಾಷ್ಟ್ರೀಕೃತ ಬ್ಯಾಂಕ್‌ನಲ್ಲೇ ಜಮಾ ಮಾಡಬೇಕು.** ಆನ್‌ಲೈನ್ ಮೂಲಕ ವಿದ್ಯಾರ್ಥಿಗಳ ವಿವರಗಳನ್ನು ನೋಂದಣಿ ಮಾಡಿದ ನಂತರ ನಾಮಯಾದಿ ಪಟ್ಟಿ (Nominal Roll) Download ಮಾಡಿಕೊಂಡು, ಮೂಲ ಬ್ಯಾಂಕ್ ಚಲನ್‌ನೊಂದಿಗೆ ನಿಗಧಿತ ದಿನಾಂಕದೊಳಗೆ ಈ ಕೆಳಗೆ ವಿವರಿಸಿರುವ ಶಾಖಾಧಿಕಾರಿಗಳಿಗೆ ತಲುಪುವಂತೆ ಕ್ರಮವಹಿಸುವುದು. ಯಾವುದೇ ಕಾರಣಕ್ಕೂ ವಿಭಾಗೀಯ ಕಾರ್ಯದರ್ಶಿಗಳಿಗಾಗಲಿ, ಜಿಲ್ಲಾ ಉಪನಿರ್ದೇಶಕರಿಗಾಗಲಿ ಅಥವಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗಾಗಲಿ ಈ ಅರ್ಜಿಗಳನ್ನು ಸಲ್ಲಿಸಬಾರದು. ಲಕೋಟೆಯ ಮೇಲೆ **<u>2024ರ ಎಸ್.ಎಸ್.ಎಲ್.ಸಿ. ಪರೀಕ್ಷೆ-2ರ ಚಲನ್</u>** ಎಂದು ಬರೆಯುವುದು.
10. 2024ರ ಎಸ್.ಎಸ್.ಎಲ್.ಸಿ ಪರೀಕ್ಷೆ-2ರ ವೇಳಾಪಟ್ಟಿಯನ್ನು ಮಂಡಳಿ ಜಾಲತಾಣದಲ್ಲಿ ಪ್ರಕಟಸಲಾಗಿದ್ದು, ಡೌನ್‌ಲೋಡ್ ಮಾಡಿಕೊಳ್ಳಲು ತಿಳಿಸಿದೆ.

| ಕ್ರ ಸಂ | ಶಾಖೆ | ಪರಿಶೀಲನಾ ಅಧಿಕಾರಿಗಳು ಶ್ರೀಮತಿ/ ಶ್ರೀ | ಜಿಲ್ಲೆ | ದೂರವಾಣಿ ಸಂಖ್ಯೆ |
|---|---|---|---|---|
| 1 | ಎಫ್ | ಅಯೂಬ್ ಪಾಷಾ, ಸಹಾಯಕ ನಿರ್ದೇಶಕರು | ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ, ಕೋಲಾರ, ಮಧುಗಿರಿ. | **9480021609** |
| 2 | ಜಿ | ಬಿ. ನರೇಂದ್ರಕುಮಾರ್, ಸಹಾಯಕ ನಿರ್ದೇಶಕರು | ಬೆಂಗಳೂರು ಉತ್ತರ, ರಾಮನಗರ, ತುಮಕೂರು, ಶಿವಮೊಗ್ಗ. | **9900190492** |

| | | | | |
|---|---|---|---|---|
| 3 | ಹೆಚ್ | ಅನಿತ ಆರ್ ಸಹಾಯಕ ನಿರ್ದೇಶಕರು | ಚಾಮರಾಜನಗರ, ಮಂಡ್ಯ ಮೈಸೂರು, ಉಡುಪಿ. | **9620213336** |
| 4 | ಐ | ಎಮ್ ವಿ ಕುಮಾರಿ<br>ಹಿರಿಯ ಸಹಾಯಕ ನಿರ್ದೇಶಕರು | ದಕ್ಷಿಣ ಕನ್ನಡ, ಹಾಸನ, ಚಿಕ್ಕಮಗಳೂರು, ಕೊಡಗು | **8762404243** |
| 5 | ಜೆ | ಜಯರಾಮುಡು,<br>ಸಹಾಯಕ ನಿರ್ದೇಶಕರು | ಬೆಳಗಾವಿ, ಚಿಕ್ಕೋಡಿ, ವಿಜಯಪುರ, ಬಾಗಲಕೋಟೆ | **9449674952** |
| 6 | ಕೆ | ಗಾಯತ್ರಿದೇವಿ.,<br>ಹಿರಿಯ ಸಹಾಯಕ ನಿರ್ದೇಶಕರು | ಧಾರವಾಡ, ಶಿರಸಿ, ಉತ್ತರ ಕನ್ನಡ, ಹಾವೇರಿ | **9986090437** |
| 7 | ಎಲ್ | ಬಿ. ನರೇಂದ್ರಕುಮಾರ್, [ಹೆ.ಪ್ರ]<br>ಸಹಾಯಕ ನಿರ್ದೇಶಕರು | ಬಳ್ಳಾರಿ, ವಿಜಯನಗರ, ಯಾದಗಿರಿ, ರಾಯಚೂರು, | **9900190492** |
| 8 | ಎಂ | ಕೆ.ಆರ್ ಮುರಳೀಧರ್<br>ಸಹಾಯಕ ನಿರ್ದೇಶಕರು | ಕಲಬುರಗಿ, ಬೀದರ್, ಕೊಪ್ಪಳ | **9980631581** |
| 9 | ಎನ್ | ಹೆಚ್ ಎಮ್ ಪ್ರಭುಸ್ವಾಮಿ<br>ಸಹಾಯಕ ನಿರ್ದೇಶಕರು | ಬೆಂಗಳೂರು ಗ್ರಾಮಾಂತರ, ದಾವಣಗೆರೆ, ಚಿತ್ರದುರ್ಗ, ಗದಗ | **9845167396** |

**ವಿಶೇಷ ಸೂಚನೆ:** ಈ ಅಧಿಸೂಚನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಮನನ ಮಾಡಿಕೊಂಡು ಮಾರ್ಚ್/ಏಪ್ರಿಲ್ 2024ರ ಎಸ್‌ಎಸ್‌ಎಲ್‌ಸಿ ಪರೀಕ್ಷೆ-1ಕ್ಕೆ ಗೈರುಹಾಜರಾದ ವಿದ್ಯಾರ್ಥಿಗಳು / ಪೂರ್ಣಗೊಳಿಸಲಾಗಿಲ್ಲದ [Not Completed] ವಿದ್ಯಾರ್ಥಿಗಳು / ಫಲಿತಾಂಶ ಉತ್ತಮಪಡಿಸಿಕೊಳ್ಳುವ ವಿದ್ಯಾರ್ಥಿಗಳು ಹಾಗೂ ಪುನರಾವರ್ತಿತ ಅಭ್ಯರ್ಥಿಗಳ/ಪೋಷಕರ ಗಮನಕ್ಕೆ ಈ ಎಲ್ಲಾ ಮಾಹಿತಿಗಳನ್ನು ತಂದು 2024ರ ಜೂನ್ ಮಾಹೆಯ ಪರೀಕ್ಷೆ-2ರ ನಿಗಧಿತ ಸಮಯದೊಳಗೆ ನೋಂದಾಯಿಸಲು ಅಗತ್ಯ ಕ್ರಮಕೈಗೊಳ್ಳಲು ತಿಳಿಸಿದೆ.

**ಪೂರಕ ಪರೀಕ್ಷೆಯ ನೋಂದಣಿ ಇತ್ಯಾದಿ ವಿಷಯಗಳ ಕುರಿತು ಯಾವುದೇ ಮಾಹಿತಿ ಪಡೆಯಲು ಕೆಳಕಂಡ ಸಹಾಯವಾಣಿ ಸಂಖ್ಯೆಗಳಿಗೆ ಕರೆಮಾಡಿ ಮಾಹಿತಿ ಪಡೆಯಬಹುದಾಗಿರುತ್ತದೆ.**

**080– 23310075 ಮತ್ತು 080– 23310076**

10/5/2024

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು (ಪರೀಕ್ಷೆಗಳು)

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ)ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಜಿಲ್ಲಾ ನೋಡಲ್ ಅಧಿಕಾರಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮುಂದಿನ ಸೂಕ್ತ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ಪ್ರೌಢ ಶಾಲಾ ಮುಖ್ಯಶಿಕ್ಷಕರುಗಳಿಗೆ ಅಗತ್ಯ ಕ್ರಮಕ್ಕಾಗಿ
5. ಶಾಖಾಧಿಕಾರಿಗಳು, ಬಿ, ಸಿ & ಲೆಕ್ಕಪತ್ರ ಶಾಖೆಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
6. ಶಾಖಾಧಿಕಾರಿಗಳು ಗಣಕ ಶಾಖೆ ಇವರು ಈ ಮಾರ್ಗಸೂಚಿಯನ್ನು ಮಂಡಳಿಯ ಜಾಲತಾಣ & ಶಾಲಾ ಲಾಗಿನ್‌ನಲ್ಲಿ ಪ್ರಕಟಿಸುವುದು.
7. ನಿರ್ದೇಶಕರು / ಕಾರ್ಯದರ್ಶಿಗಳ ಆಪ್ತ ಶಾಖೆಯ ಮಾಹಿತಿಗಾಗಿ,
8. ಮಂಡಳಿಯ ಎಲ್ಲಾ ಪರಿಶೀಲನಾ ಶಾಖೆಯ ಶಾಖಾಧಿಕಾರಿಗಳು ಮತ್ತು ಅಧೀಕ್ಷಕರುಗಳಿಗೆ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು:-**

1. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಗೌರವಗಳೊಂದಿಗೆ ಸಲ್ಲಿಸಿದೆ.
2. ಮಾನ್ಯ ಅಧ್ಯಕ್ಷರ ಆಪ್ತ ಶಾಖೆಗೆ.
3. ಕಛೇರಿ ಪ್ರತಿ.